**All India Radio: Bangalore**
**Regional Bulletin In Kannada**
**17.12.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**17.12.2025 / 2.30 p.m.**
**<><><><>**

ಮುಖ್ಯಾಂಶಗಳು

1. ಗೃಹಲಕ್ಷ್ಮಿ ಬಗ್ಗೆ ತಪ್ಪು ಮಾಹಿತಿ ; ಸದನದಲ್ಲಿ ವಿಷಾದ ವ್ಯಕ್ತಪಡಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ; ಕ್ಷಮೆಯಾಚನೆಗೆ ಪ್ರತಿಪಕ್ಷಗಳ ಪಟ್ಟು
2. ಕಾವೇರಿ-೨, ಇ-ಸ್ವತ್ತು, ಡಿಜಿಟಲ್ ಡೇಟಾ ಲಿಂಕ್‌ಗೆ ತ್ವರಿತ ಪರಿಹಾರ -ಮೇಲ್ಮನೆಯಲ್ಲಿ ಸಚಿವ ಕೃಷ್ಣ ಬೈರೇಗೌಡ ಸ್ಪಷ್ಟನೆ
3. ನ್ಯಾಷನಲ್ ಹೆರಾಲ್ಡ್ ಪ್ರಕರಣ ; ಕೇಂದ್ರ ಸರ್ಕಾರದ ವಿರುದ್ಧ ಬೆಳಗಾವಿಯಲ್ಲಿ ಮುಖ್ಯಮಂತ್ರಿ ನೇತೃತ್ವದಲ್ಲಿ ಪ್ರತಿಭಟನೆ
4. ರಾಜ್ಯ ಕಾನೂನು ವಿಶ್ವವಿದ್ಯಾಲಯದ ವಿವಿಧ ಕಾಮಗಾರಿಗಳಿಗೆ ಸಚಿವ ಎಚ್.ಕೆ. ಪಾಟೀಲ್ ಶಂಕುಸ್ಥಾಪನೆ

<><><><>

ರಾಜ್ಯದಲ್ಲಿ ಗೃಹಲಕ್ಷ್ಮಿ ಫಲಾನುಭವಿಗಳಿಗೆ ಹಣ ಪಾವತಿಯಾಗಿರುವ ವಿಚಾರಕ್ಕೆ ಸಂಬಂಧಿಸಿದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸದನಕ್ಕೆ ತಪ್ಪು ಮಾಹಿತಿ ನೀಡಿ ಅಗೌರವ ತೋರಿದ್ದಾರೆ ಎಂದು ಆರೋಪಿಸಿ ಪ್ರತಿಪಕ್ಷಗಳು ವಿಧಾನಸಭೆಯಲ್ಲಿ ಇಂದು ಧರಣಿ ನಡೆಸಿದವು. ಸಚಿವರು ಈ ಬಗ್ಗೆ ಸ್ಪಷ್ಟನೆ ನೀಡಬೇಕು ಎಂದು ಪಟ್ಟು ಹಿಡಿದರು. ಈ ನಡುವೆ ಆಡಳಿತ ಮತ್ತು ಬಿಜೆಪಿ ಶಾಸಕರ ನಡುವೆ ಮಾತಿನ ಚಕಮಕಿ ನಡೆಯಿತು. ಈ ಹಿನ್ನೆಲೆಯಲ್ಲಿ ಸದನವನ್ನು ಸಭಾಧ್ಯಕ್ಷ ಯು.ಟಿ. ಖಾದರ್ ಕೆಲಕಾಲ ಮುಂದೂಡಿದರು. ಬಳಿಕ ಸಭಾಧ್ಯಕ್ಷರು ಸಚಿವರಿಂದ ಉತ್ತರ ಕೊಡಿಸುವುದಾಗಿ ಭರವಸೆ ನೀಡಿ, ಪ್ರಶ್ನೋತ್ತರ ಕಲಾಪ ನಡೆಸಲು ಸಹಕರಿಸಿ ಎಂದು ಮನವಿ ಮಾಡಿದರು. ಸದನ ಮತ್ತೆ ಸೇರಿದಾಗ ಪ್ರತಿಪಕ್ಷ ನಾಯಕರು ಸದನದ ಬಾವಿಗಿಳಿದು ಧರಣಿ ನಡೆಸಿದರು. ಈ ವೇಳೆ ಸದನಕ್ಕೆ ಆಗಮಿಸಿದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸದನದಲ್ಲಿ ತಪ್ಪು ಒಪ್ಪಿಕೊಂಡು ಸ್ಪಷ್ಟನೆ ನೀಡಿದರು. ಗೃಹಲಕ್ಷ್ಮೀ ಬಗ್ಗೆ ತಪ್ಪು ಮಾಹಿತಿ ನೀಡಿದ್ದಕ್ಕಾಗಿ ವಿಷಾದ ವ್ಯಕ್ತಪಡಿಸಿದರು. ಪ್ರತಿಪಕ್ಷ ನಾಯಕರು, ಸಚಿವರು ಕ್ಷಮೆ ಕೇಳುವಂತೆ ಆಗ್ರಹಿಸಿದರು. ಈ ಹಿನ್ನೆಲೆಯಲ್ಲಿ ಸದನದಲ್ಲಿ ಕೆಲಕಾಲ ಗದ್ದಲ ಉಂಟಾಯಿತು.

<><><><>

ರಾಜ್ಯದಲ್ಲಿ ಕಾವೇರಿ-೨ ಮತ್ತು ಇ-ಸ್ವತ್ತು ಡಿಜಿಟಲ್ ಡೇಟಾ ಪರಸ್ಪರ ಲಿಂಕ್ ಮಾಡುವಲ್ಲಿ ಉಂಟಾಗಿರುವ ತಾಂತ್ರಿಕ ತೊಂದರೆ ಸರಿಪಡಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿಕೊಡುವುದಾಗಿ ಕಂದಾಯ ಸಚಿವ ಕೃಷ್ಣ ಬೈರೇಗೌಡ ವಿಧಾನ ಪರಿಷತ್‌ನಲ್ಲಿ ಇಂದು ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಸದಸ್ಯ ಡಿ.ಎಸ್.ಅರುಣ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕಾವೇರಿ ೨.೦ ತಂತ್ರಾಂಶದಲ್ಲಿ ವಿಭಾಗಪತ್ರ ಹಾಗೂ ದಾನಪತ್ರಗಳ ನೋಂದಣಿ ಸ್ಥಗಿತವಾಗಿರುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಆರ್‌ಟಿಸಿ, ಮೋಜಿಣಿ ನಕ್ಷೆ, ಇ ಸ್ವತ್ತು ಖಾತಾ, ಇ-ಆಸ್ತಿ ಖಾತಾ ಹೊಂದಿರುವ ಸ್ವತ್ತುಗಳ ವಿಭಾಗಪತ್ರ ಹಾಗೂ ದಾನಪತ್ರಗಳು ಎಂದಿನಂತೆ ನೋಂದಣಿ ಆಗುತ್ತಿವೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ವಿವಿಧ ವಸತಿ ಯೋಜನೆಯಡಿಯಲ್ಲಿ ನೀಡಲಾಗುತ್ತಿರುವ ಸಹಾಯಧನ ಹೆಚ್ಚಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಮೇಲ್ಮನೆಯಲ್ಲಿ ತಿಳಿಸಿದ್ದಾರೆ. ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಅವರ ಪರವಾಗಿ ಸಚಿವ ರಾಮಲಿಂಗಾರೆಡ್ಡಿ ಅವರು ಆಡಳಿತ ಪಕ್ಷದ ಸದಸ್ಯ ಡಿ.ಟಿ.ಶ್ರೀನಿವಾಸ್ ಅವರ ಪ್ರಶ್ನೆಗೆ ಉತ್ತರಿಸಿ, ೨೦೨೪-೨೦೨೫ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಅವಾಸ್ ಯೋಜನೆಯ ಗ್ರಾಮೀಣ ವಿಭಾಗದ ಅಡಿಯಲ್ಲಿ ಹಾಗೂ ರಾಜ್ಯ

ಸರ್ಕಾರದ ವಸತಿ ಯೋಜನಗಳಡಿ ಒಟ್ಟಾರೆ ೭ ಲಕ್ಷದ ೩೮ ಸಾವಿರದ ೮೮೧ ಮನೆಗಳನ್ನು ಜಿಲ್ಲೆಗಳಿಗೆ ಹಂಚಿಕೆ ಮಾಡಲಾಗಿದೆ ಎಂದು ಹೇಳಿದ್ದಾರೆ.

<><><><>

ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಕೇಂದ್ರ ಸರ್ಕಾರ ಅಧಿಕಾರ ದುರುಪಯೋಗ ಪಡಿಸಿಕೊಂಡಿರುವುದನ್ನು ಖಂಡಿಸಿ, ಕಾಂಗ್ರೆಸ್ ಬೆಳಗಾವಿಯ ಸುವರ್ಣಸೌಧದ ಗಾಂಧಿ ಪ್ರತಿಮೆ ಬಳಿ ಪ್ರತಿಭಟನೆ ನಡೆಸಿತು. ಪ್ರತಿಭಟನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪಾಲ್ಗೊಂಡಿದ್ದರು. ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಬಿಜೆಪಿ ತಪ್ಪು ಮರೆಮಾಚಲು ಕಾಂಗ್ರೆಸ್ ನಾಯಕರನ್ನು ಸುಳ್ಳು ಪ್ರಕರಣಗಳಲ್ಲಿ ಸಿಲುಕಿಸುತ್ತಿದೆ ಎಂದು ಆರೋಪಿಸಿದ್ದಾರೆ. ಬಿಜೆಪಿಯ ದ್ವೇಷ ರಾಜಕಾರಣಕ್ಕೆ ಉತ್ತರವಾಗಿ ನ್ಯಾಯಾಲಯದಲ್ಲಿ ನ್ಯಾಯ ದೊರೆತಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ (೩೪ ಸೆಕೆಂಡ್‌ಗಳು)**

ಸರ್ಕಾರದ ಎಲ್ಲಾ ಸಚಿವರು ಮತ್ತು ಶಾಸಕರು ಪ್ರತಿಭಟನೆಯಲ್ಲಿ ಭಾಗವಹಿಸಿ ಸಾಂವಿಧಾನಿಕ ಸಂಸ್ಥೆಗಳನ್ನು ಕೇಂದ್ರ ಸರ್ಕಾರ ಹಾಳುಗೆಡವುತ್ತಿದೆ ಎಂದು ಆರೋಪಿಸಿದರು.

<><><><>

ಯುಐಡಿಎಐ ಸೆಪ್ಟೆಂಬರ್ ೨೦೨೬ರ ವೇಳೆಗೆ ದೇಶಾದ್ಯಂತ ೪೭೩ ಆಧಾರ್ ಸೇವಾ ಕೇಂದ್ರಗಳನ್ನು ತೆರೆಯಲು ಯೋಜಿಸಿದೆ. ರಾಜ್ಯದಲ್ಲಿ ೨೨ ಕೇಂದ್ರಗಳನ್ನು ತೆರೆಯಲು ನಿರ್ಧರಿಸಲಾಗಿದೆ ಎಂದು ಬೆಂಗಳೂರಿನ ಯುಐಡಿಎಐ ತಂತ್ರಜ್ಞಾನ ಕೇಂದ್ರದ ಉಪ ಮಹಾನಿರ್ದೇಶಕಿ ತನುಶ್ರೀ ದೇಬ್ ಬರ್ಮಾ ತಿಳಿಸಿದ್ದಾರೆ. ಬೆಂಗಳೂರಿನ ಎಚ್‌ಎಸ್‌ಆರ್ ಲೇಔಟ್‌ನಲ್ಲಿ ಇಂದು ನೂತನ ಆಧಾರ್ ಸೇವಾ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ಎಚ್‌ಎಸ್‌ಆರ್ ಲೇಔಟ್‌ನಲ್ಲಿರುವ ಆಧಾರ್ ಸೇವಾ ಕೇಂದ್ರವು ನೇರ ಯುಐಡಿಎಐ ಮೇಲ್ವಿಚಾರಣೆಯಲ್ಲಿ ಪ್ರಮಾಣೀಕೃತ, ಸುರಕ್ಷಿತ ಮತ್ತು ಉತ್ತಮ ಗುಣಮಟ್ಟದ ಆಧಾರ್ ಸೇವೆಗಳನ್ನು ಒದಗಿಸಲಿದೆ ಎಂದು ಹೇಳಿದ್ದಾರೆ.

**ಧ್ವನಿ : ತನುಶ್ರೀ ದೇಬ್ ಬರ್ಮಾ (೩೦ ಸೆಕೆಂಡ್‌ಗಳು)**

ಈ ಕೇಂದ್ರದಲ್ಲಿ ಆಧಾರ್ ದಾಖಲಾತಿ, ಜನಸಂಖ್ಯಾ ಮತ್ತು ಬಯೋಮೆಟ್ರಿಕ್ ನವೀಕರಣಗಳು, ದೋಷ ತಿದ್ದುಪಡಿಗಳು, ಕುಂದುಕೊರತೆ ಪರಿಹಾರ ಮತ್ತು ಸ್ಥಿತಿ ಟ್ರ್ಯಾಕಿಂಗ್ ಒಂದೇ ಸೂರಿನಡಿ ದೊರೆಯಲಿದೆ.

<><><><>

ಹುಬ್ಬಳ್ಳಿಯ ರಾಜ್ಯ ಕಾನೂನು ವಿಶ್ವವಿದ್ಯಾಲಯದಲ್ಲಿ ಗ್ರಂಥಾಲಯ, ಉಪಹಾರ ಗೃಹ, ಅತಿಥಿ ಗೃಹ ಹಾಗೂ ಬಾಲಕಿಯರ ವಸತಿ ನಿಲಯ ಕಟ್ಟಡಗಳ ಕಾಮಗಾರಿಗಳನ್ನು ೩೭ ಕೋಟಿ ರೂಪಾಯಿ ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ ಎಂದು ಕಾನೂನು ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ. ಕಾನೂನು ವಿಶ್ವವಿದ್ಯಾಲಯದ ವಿವಿಧ ಕಟ್ಟಡ ಕಾಮಗಾರಿಗಳ ಶಂಕು ಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಈ ಎಲ್ಲಾ ಕಾಮಗಾರಿಗಳನ್ನು ೧೧ ತಿಂಗಳ ಕಾಲಾವಧಿಯಲ್ಲಿ ಪೂರ್ಣಗೊಳಿಸಬೇಕು ಎಂದು ಸೂಚಿಸಿದ್ದಾರೆ. ಈ ವಿಶ್ವವಿದ್ಯಾನಿಲಯವನ್ನು ಆದರ್ಶ ವಿಶ್ವವಿದ್ಯಾಲಯ ಮಾಡುವ ಗುರಿ ಹೊಂದಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಕಾರ್ಯಕ್ರಮದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ, ಶಾಸಕ ಅರವಿಂದ ಬೆಲ್ಲದ್ ಉಪಸ್ಥಿತರಿದ್ದರು.

<><><><>

ಬೆಂಗಳೂರಿನಲ್ಲಿಂದು ಮೊದಲ ಜೆನ್-ಝಿ ಅಂಚೆ ಕಚೇರಿಯನ್ನು ಕರ್ನಾಟಕ ವೃತ್ತದ ಮುಖ್ಯ ಪೋಸ್ಟ್ ಮಾಸ್ಟರ್ ಜನರಲ್ ಕೆ. ಪ್ರಕಾಶ್ ಉದ್ಘಾಟಿಸಿದರು. ಈ ಪೋಸ್ಟ್ ಆಫೀಸ್‌ನ್ನು ನಗರದ ಖಾಸಗಿ ಕಾಲೇಜಿನಲ್ಲಿ ಯುವಸ್ನೇಹಿ ತಂತ್ರಜ್ಞಾನ ಚಾಲಿತ ಸ್ಥಳವಾಗಿ ವಿನ್ಯಾಸಗೊಳಿಸಲಾಗಿದೆ. ಈ ಕಚೇರಿಯ ಸಮುದಾಯ ಉಪಯುಕ್ತತೆಗಳು ಯುವಪೀಳಿಗೆಯ ಆದ್ಯತೆಗಳೊಂದಿಗೆ ಹೊಂದಿಕೆಯಾಗಲಿವೆ. ಅಂಚೆ ಸಿಬ್ಬಂದಿಯೊಂದಿಗೆ ಕಾರ್ಯ ನಿರ್ವಹಿಸಲು ವಿದ್ಯಾರ್ಥಿಗಳನ್ನು ಆಹ್ವಾನಿಸುವುದು ಇದರ

ಪರಿಕಲ್ಪನೆಯಾಗಿದೆ. ರಾಜ್ಯದ ಇತರ ಮೂರು ಶಿಕ್ಷಣ ಸಂಸ್ಥೆಗಳಲ್ಲಿ ಜೆನ್-ಝಿ ಅಂಚೆ ಕಚೇರಿಗಳನ್ನು ತೆರೆಯಲು ನಿರ್ಧರಿಸಲಾಗಿದೆ.

<><><>

ರಾಜ್ಯಾದ್ಯಂತ ಇದೇ ೨೧ರಂದು ಪಲ್ಸ್ ಪೋಲಿಯೊ ಅಭಿಯಾನ ನಡೆಯಲಿದೆ. ಚಿಕ್ಕಮಗಳೂರು ತಾಲ್ಲೂಕಿನಲ್ಲಿ ಒಂದೇ ಒಂದು ಮಗುವೂ ಪೋಲಿಯೊ ಸೋಂಕಿಗೆ ಒಳಗಾಗದಂತೆ ಎಚ್ಚರ ವಹಿಸುವಂತೆ ತಹಸೀಲ್ದಾರ್ ರೇಷ್ಮಾ ಶೆಟ್ಟಿ ಅಧಿಕಾರಿಗಳೀಗೆ ಸೂಚಿಸಿದ್ದಾರೆ. ಐದು ವರ್ಷಗಳ ಒಳಗಿನ ಎಲ್ಲಾ ಮಕ್ಕಳಿಗೆ ಎರಡು ಹನಿ ಪಲ್ಸ್ ಪೋಲಿಯೊ ಲಸಿಕೆ ಹಾಕುವುದರ ಮುಖಾಂತರ ಪೋಲಿಯೊವನ್ನು ಸಂಪೂರ್ಣವಾಗಿ ತಡೆಗಟ್ಟಬಹುದು ಎಂದು ಯಾದಗಿರಿ ತಾಲ್ಲೂಕು ತಹಶೀಲ್ದಾರ್ ಸುರೇಶ ಅಂಕಲಗಿ ಹೇಳಿದ್ದಾರೆ. ಐದು ವರ್ಷದೊಳಗಿನ ಮಕ್ಕಳಿಗೆ ಕಡ್ಡಾಯವಾಗಿ ಲಸಿಕೆ ನೀಡುವಂತೆ ರಾಮನಗರ ತಹಸೀಲ್ದಾರ್ ಜಯಣ್ಣ ತಾಲ್ಲೂಕು ಆರೋಗ್ಯ ಸಿಬ್ಬಂದಿಗಳಿಗೆ ಸೂಚಿಸಿದ್ದಾರೆ. ಇದೇ ೨೧ರಂದು ಬೆಳಗ್ಗೆ ೮ರಿಂದ ಸಂಜೆ ೫ ಗಂಟೆಯವರೆಗೆ ಬೂತ್ ಮಟ್ಟದಲ್ಲಿ ಲಸಿಕೆ ಅಭಿಯಾನ ನಡೆಯಲಿದೆ. ಇದೇ ೨೨ರಿಂದ ೨೪ರವರೆಗೆ ಮನೆ ಮನೆಗೆ ತೆರಳಿ ಮಕ್ಕಳಿಗೆ ಪೋಲಿಯೊ ಎರಡು ಹನಿಗಳನ್ನು ನೀಡಲಾಗುತ್ತದೆ.

<><><>

ಸ್ವಚ್ಛ ಭಾರತ ಅಭಿಯಾನ ಹಿನ್ನೆಲೆಯಲ್ಲಿ ನಗರಾಭಿವೃದ್ಧಿ ಇಲಾಖೆ ಮತ್ತು ಪೌರಾಡಳಿತ ಇಲಾಖೆ ಬೆಳಗಾವಿಯಲ್ಲಿ ಇಂದು ಮುಂಜಾನೆ ಆಯೋಜಿಸಿದ್ದ ಸ್ವಚ್ಛತಾ ಓಟಕ್ಕೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಡಿ.ಕೆ. ಶಿವಕುಮಾರ್, ಬೆಳಗಾವಿ ನಗರ ಗಿಡಮರ, ಕೆರೆ, ಕೋಟೆಗಳಿಂದ ಕೂಡಿದ ಸುಂದರ ನಗರವಾಗಿದೆ. ನಗರಕ್ಕೆ ಈಗಾಗಲೇ ಎರಡನೂರು ಕೋಟಿ ಹಣಕಾಸಿನ ನೆರವು ನೀಡಲಾಗಿದೆ ಎಂದು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>